**ಕರ್ನಾಟಕ ಸರ್ಕಾರ**
**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಬಿಟಿಇ/01/ಇಸಿಎಸ್(2)/2019-20

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-01,
ದಿನಾಂಕ:29-06-2019

**ಸುತ್ತೋಲೆ**

ವಿಷಯ: 2019 ರ ಏಪ್ರಿಲ್/ಮೇ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಯ ಮೌಲ್ಯಮಾಪನವಾದ ಉತ್ತರ ಪತ್ರಿಕೆಗಳ ಫೋಟೋ ಪ್ರತಿ/ ಮರು ಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಶುಲ್ಕ ಪಾವತಿಸುವ ಕುರಿತು.

ಉಲ್ಲೇಖ:ಈ ಕಛೇರಿ ಸುತ್ತೋಲೆ ಸಂಖ್ಯೆ: ಬಿಟಿಇ/01/ಇಸಿಎಸ್(2)/2019-20 ದಿ:19-06-2019

*******

ಮೇಲ್ಕಂಡ ವಿಷಯ ಸಂಬಂಧಿಸಿದಂತೆ, 2019 ರ ಏಪ್ರಿಲ್/ಮೇ ತಿಂಗಳಿನಲ್ಲಿ ನಡೆದ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಯ ಮೌಲ್ಯಮಾಪನವಾದ ಉತ್ತರ ಪತ್ರಿಕೆಗಳ ಫೋಟೋ ಪ್ರತಿ ಪಡೆಯಲು ಮತ್ತು ಮರು ಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಇಚ್ಛಿಸುವ ವಿದ್ಯಾರ್ಥಿಗಳು ದಿನಾಂಕ:29-06-2019 ರೊಳಗೆ ಖಜಾನೆ-II ಮೂಲಕ ನಿಗದಿತ ಶುಲ್ಕವನ್ನು ಪಾವತಿಸಲು ಉಲ್ಲೇಖಿತ ಸುತ್ತೋಲೆಯಲ್ಲಿ ತಿಳಿಸಲಾಗಿತ್ತು.

ಆದರೆ ಖಜಾನೆ-II ವೆಬ್‌ಸೈಟ್‌ನ ಸರ್ವರ್‌ನಲ್ಲಿ ತಾಂತ್ರಿಕ ತೊಂದರೆಯಿರುವ ಕಾರಣ ಶುಲ್ಕ ಪಾವತಿಸಲು ಸಾಧ್ಯವಾಗುತ್ತಿಲ್ಲ ಎಂಬ ಅಂಶದ ಕಾರಣ ಉತ್ತರ ಪತ್ರಿಕೆಗಳ ಮೌಲ್ಯಮಾಪನ /ಫೋಟೋ ಪ್ರತಿ ಗಾಗಿ ಅರ್ಜಿ ಸಲ್ಲಿಸಲು ದಿನಾಂಕ: **02-07-2019 ರವರೆಗೆ ವಿಸ್ತರಿಸಲಾಗಿದೆ.**

ಸಂಸ್ಥೆಗಳು, ಸದರಿ ವಿದ್ಯಾರ್ಥಿಗಳ ಅರ್ಜಿಗಳಲ್ಲಿನ ವಿವರಗಳನ್ನು ಬಿಟಿಇಲಿಂಕ್ಸ್ ವೆಬ್‌ಪೋರ್ಟಲ್‌ನ ಮೂಲಕ ಆನ್ ಲೈನ್‌ನಲ್ಲಿ ದಿನಾಂಕ: **02-07-2019 ರವರೆಗೆ ಸಂಜೆ 5.30** ಗಂಟೆಯೊಳಗೆ ಅಪ್‌ಲೋಡ್ ಮಾಡಲು ತಿಳಿಸಲಾಗಿದೆ. ಈ ವಿಷಯವನ್ನು ಎಲ್ಲಾ ವಿದ್ಯಾರ್ಥಿ/ಪೋಷಕರ ಗಮನಕ್ಕೆ ತಪ್ಪದೇ ತರಲು ಪ್ರಾಂಶುಪಾಲರಿಗೆ ಈ ಮೂಲಕ ತಿಳಿಸಲಾಗಿದೆ.

N. D... 29/06/19
**ಕಾರ್ಯದರ್ಶಿ**

**ಇವರಿಗೆ,**
ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ

ಪ್ರತಿ: 1) ಇ- ಆಡಳಿತ –ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
2) ಗಣಕ ಕೇಂದ್ರ – ವೆಬ್‌ಪೋರ್ಟಲ್/ www.btekarlinx.net ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
3) ಕಾರ್ಯದರ್ಶಿಯವರು ಆಪ್ತ ಶಾಖೆ